MVC No. 108/2021 PW-1

<u>ದಿನಾಂಕ **01.08.2024** ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲು ಃ ಎದುರುದಾರರಾದ ಆರ್ **2** ಪರ ಶ್ರೀ ಎಸ್ ಎಸ್ ವಕೀಲರಿಂದ ಃ</u>

ನನಗೆ 75 ವರ್ಷ ಎಂದರೆ ಸಾಕ್ಷಿಯು 55-60 ವರ್ಷ ವಯಸ್ಸಾಗಿದೆ ಎಂದು ನುಡಿಯುತ್ತಾರೆ. ನನ್ನ ಆಧಾರ್ ಕಾರ್ಡ್ ಅನ್ನು ನ್ಯಾಯಾಲಯಕ್ಕೆ ಕೊಡಲು ತೊಂದರೆ ಇಲ್ಲ. ನಾನೇ ನುಗ್ಗಿ ನನ್ನ ತಪ್ಪಿನಿಂದ ಅಪಘಾತವಾಗಿದೆ ಎಂದರೆ ಸುಳ್ಳು. ಗಾಯಗಳು ವಾಸಿಯಾಗಿವೆ ಎಂದರೆ ಸುಳ್ಳು. ನನಗೆ ಶಸ್ತ್ರ ಚಿಕಿತ್ಸೆಯನ್ನು ಚುಂಚನಗಿರಿಯ ಆಸ್ಪತ್ರೆಯಲ್ಲಿ ಮಾಡಿದ್ದಾರೆ. ನಾನು ಆಸ್ಪತ್ರೆಯಲ್ಲಿ 3 ತಿಂಗಳು ಇದ್ದೆ. ಅಪಘಾತದಿಂದ ನಾನು ಆಸ್ಪತ್ರೆಗೆ ದಾಖಲಾಗಿಲ್ಲ ಎಂದರೆ ಸುಳ್ಳು. ಅಪಘಾತದಿಂದ ನನಗೆ ಯಾವುದೇ ತೊಂದರೆ ಇಲ್ಲ ಚೆನ್ನಾಗಿದ್ದೇನೆಂದರೆ ಸುಳ್ಳು. ನನ್ನ ಬಳಿ ಪಡಿತರ ಚೀಟಿ ಇದೆ. ಅದರಿಂದ ಆಸ್ಪತ್ರೆಯಲ್ಲಿ ಉಚಿತವಾಗಿ ಚಿಕಿತ್ಸೆ ನೀಡಿರುತ್ತಾರೆಂದರೆ ಸುಳ್ಳು. ನನ್ನ ವೈದ್ಯಕೀಯ ಚಿಕಿತ್ಸೆಗಾಗಿ 5 ಲಕ್ಷ ರೂಪಾಯಿ ಹಣ ಖರ್ಚಾಗಿದೆ ಎಂದು ಹೇಳಿದ್ದು ಅದು ಸುಳ್ಳು ಎಂದರೆ ಸುಳ್ಳು. ನನಗೆ ಅಪಘಾತವಾಗುವುದಕ್ಕಿಂತ ಮುಂಚೆ ನಾನು ಕೆಲಸ ಮಾಡಿ ತಿಂಗಳಿಗೆ 50 ಸಾವಿರ ಸಂಪಾದನೆ ಮಾಡುತ್ತಿದ್ದೆ ಎಂದು ಹೇಳಿದ್ದು ಆ ರೀತಿ ಹೇಳಿರುವುದು ಸುಳ್ಳು ಎಂದರೆ ಸುಳ್ಳು. ಆ ಬಗ್ಗೆ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸುಳ್ಳು. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿ ಮಾಡಿಕೊಂಡು ಹಾಜರುಪಡಿಸಿರುತ್ತೇನೆಂದರೆ ಸುಳ್ಳು. ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಹಾಕಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು.

<u>ಮರುವಿಚಾರಣೆ ಃ ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ ಹೇ ಕೇ ಸ ಒ

(ವೆಂಕಟೇಶಪ್ಪ. ವಿ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.